## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2017-18ನೇ ಸಾಲಿನ ಕೇಂದ್ರ ಪುರಸ್ಕೃತ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಪಿ.ಎಸ್.ಎ) ಯೋಜನೆಯಡಿಯ 2ನೇ ಕಂತಿನ ಅನುದಾನಕ್ಕೆ ರಾಜ್ಯ ಸರ್ಕಾರದ ಪಾಲಿನ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 139 ಜಿಪಸ 2012(ಪಿ-3), ದಿನಾಂಕ:29-07-2013
2. ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವರ ಆದೇಶ ಪತ್ರ ಸಂಖ್ಯೆ:ಕೆ-11011/28/2017-CB, ದಿನಾಂಕ:12-01-2018.
3. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 594 ವೆಚ್ಚ-6/2017, ದಿನಾಂಕ:25-07-2018.
4. ಆರ್ಥಿಕ ಇಲಾಖೆಯ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: ಆಇ 05 ಬಿಪಿಇ 2018, ದಿನಾಂಕ:24-07-2018.

**ಪ್ರಸ್ತಾವನೆ:**

ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ರಾಷ್ಟ್ರದಾದ್ಯಂತ ಅನುಷ್ಠಾನಗೊಳಿಸುತ್ತಿರುವ e-PANCHAYAT, ಪಂಚಾಯತ್ ಎಂಪವರ್‌ಮೆಂಟ್ ಅಂಡ್ ಅಕೌಂಟಬಿಲಿಟಿ ಇನ್ಸೆಂಟೀವ್ ಸ್ಕೀಮ್ (PEAIS) ಹಾಗೂ ಪಂಚಾಯತ್ ಮಹಿಳಾ ಏವಂ ಯುವಶಕ್ತಿ ಅಭಿಯಾನ (PMEYSA) ಯೋಜನೆಗಳಲ್ಲಿ ಅಳವಡಿಸಿಕೊಳ್ಳಲಾಗಿದ್ದ ಸಾಮರ್ಥ್ಯಾಭಿವೃದ್ಧಿ ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಸಮ್ಮಿಳನಗೊಳಿಸಿ, ಪಂಚಾಯತ್ ರಾಜ್ ಸಂಸ್ಥೆಗಳನ್ನು ಮತ್ತು ಅದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಸಾಮರ್ಥ್ಯಾಭಿವೃದ್ಧಿಯನ್ನು ಬಲಪಡಿಸುವ ಉದ್ದೇಶದಿಂದ 2012-13ನೇ ಸಾಲಿನಿಂದ ನೂತನ ಯೋಜನೆ, ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆಯನ್ನು ಕೇಂದ್ರ ಸರ್ಕಾರವು ಜಾರಿಗೊಳಿಸಿದೆ. ಮೇಲೆ ಓದಲಾದ(1)ರಲ್ಲಿನ ಸರ್ಕಾರದ ಆದೇಶದಲ್ಲಿ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಅಗತ್ಯವಿರುವ ಅನುದಾನವನ್ನು ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರ ಕ್ರಮವಾಗಿ 75:25ರ ಅನುಪಾತದಲ್ಲಿ ಭರಿಸಲು ಆದೇಶಿಸಲಾಗಿದೆ. ಅದರಂತೆ, 2016-17ನೇ ಸಾಲಿಗೆ ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆ'ಯ ಹೆಸರಿನಲ್ಲಿ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.

ಮೇಲೆ ಓದಲಾದ(2)ರಲ್ಲಿನ ಕೇಂದ್ರ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯದ ಆದೇಶದಲ್ಲಿ 2017-18ನೇ ಸಾಲಿಗೆ ಕೇಂದ್ರ ಸರ್ಕಾರದ ಪಾಲಿನ ಅನುದಾನದ ಒಟ್ಟು ಮೊತ್ತ ರೂ.4536.78ಲಕ್ಷಗಳಾಗಿದ್ದು, ಸದರಿ ಅನುದಾನವನ್ನು ವರ್ಗೇತರ (NON-SC) ಯೋಜನೆ ಮತ್ತು ವಿಶೇಷ ಘಟಕ (SC) ಯೋಜನೆಗಳಾಗಿ ನಿಗಧಿಪಡಿಸಿ, ಕೇಂದ್ರ ಸರ್ಕಾರವು ರಾಜ್ಯ ಸರ್ಕಾರಕ್ಕೆ ಅನುಕ್ರಮವಾಗಿ ರೂ.18,14,71,200/-(ಹದಿನೆಂಟು ಕೋಟಿ ಹದಿನಾಲ್ಕು ಲಕ್ಷದ ಎಪ್ಪತ್ತೊಂದು ಸಾವಿರದ ಎರಡು ನೂರು ರೂಪಾಯಿಗಳು ಮಾತ್ರ) ಮತ್ತು ರೂ.4,53,67,800/-(ನಾಲ್ಕು ಕೋಟಿ ಐವತ್ಮೂರು ಲಕ್ಷದ ಅರವತ್ತೇಳು ಸಾವಿರದ ಎಂಟು ನೂರು ರೂಪಾಯಿಗಳು ಮಾತ್ರ)ಗಳಾಗಿ ವಿಂಗಡಿಸಿ, ಒಟ್ಟಾರೆಯಾಗಿ ರೂ.22,68,39,000/-(ಇಪ್ಪತ್ತೆರಡು ಕೋಟಿ ಅರವತ್ತೆಂಟು ಲಕ್ಷದ ಮೂವತ್ತೊಂಬತ್ತು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ನೇರವಾಗಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು ಇವರಿಗೆ ಬಿಡುಗಡೆಗೊಳಿಸಲು ಆದೇಶಿಸಲಾಗಿದೆ. ಈ ಅನುದಾನಕ್ಕೆ ಸಮವರ್ತಿಯಾಗಿ ರಾಜ್ಯ ಸರ್ಕಾರದ ಪಾಲಿನ ಶೇ.25ರಷ್ಟು ಮೊತ್ತವನ್ನು ಲೆಕ್ಕಶೀರ್ಷಿಕೆ:2515-00-101-0-31 (RGSA)-059(ಇತರೆ ಖರ್ಚುಗಳು)ರಡಿ ಬಿಡುಗಡೆಗೊಳಿಸಲು ಸರ್ಕಾರವು ತೀರ್ಮಾನಿಸಿದ್ದು, ಈ ಕೆಳಗಿನಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 138 ಜಿಪಸ 2017(ಪಿ-1), ಬೆಂಗಳೂರು, ದಿನಾಂಕ:16-08-2018.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, "ಪಂಚಾಯತಿ ಸಶಕ್ತೀಕರಣ ಅಭಿಯಾನ್(ಪಿ.ಎಸ್.ಎ) ಯೋಜನೆ"ಯ ವಿವಿಧ ಚಟುವಟಿಕೆಗಳನ್ನು ಅನುಷ್ಠಾನಗೊಳಿಸಲು 2018-19ನೇ ಸಾಲಿನ ಲೆಕ್ಕಶೀರ್ಷಿಕೆ:2515-00-101-0-31 (RGSA)-059(ಇತರೆ ಖರ್ಚುಗಳು)ರಡಿ ಒದಗಿಸಲಾಗಿರುವ ರೂ.767.00ಲಕ್ಷಗಳಲ್ಲಿ 2017-18ನೇ ಸಾಲಿನ 2ನೇ ಕಂತಿನ ಕೇಂದ್ರದ ಪಾಲಿನ ಸಮವರ್ತಿಯಾಗಿ ರಾಜ್ಯದ ಪಾಲಿನ

ಅನುದಾನ ರೂ.7,56,13,000/-(ಏಳು ಕೋಟಿ ಐವತ್ತಾರು ಲಕ್ಷ ಹದಿಮೂರು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಬಿಡುಗಡೆಗೊಳಿಸಲು ಆದೇಶಿಸಿದೆ. ಈ ಮೊತ್ತವನ್ನು ಸರ್ಕಾರದ ಅಧೀನ ಕಾರ್ಯದರ್ಶಿ(ಜಿಲ್ಲಾ ಪಂಚಾಯತ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರು ರಾಜ್ಯ ಹುಜೂರ್ ಖಜಾನೆಯಿಂದ ಪೇಯಿಸ್ ರಸೀತಿಯ ಮೇಲೆ ಡ್ರಾ ಮಾಡಲು ಹಾಗೂ ಈ ಅನುದಾನದ ಮೊತ್ತವನ್ನು ರಾಜೀವ್‌ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)ಯೋಜನೆಗಾಗಿ ತೆರೆಯಲಾಗಿರುವ ಬೆಂಗಳೂರಿನ ಇಂದಿರಾನಗರ ದೇನಾ ಬ್ಯಾಂಕ್ ಶಾಖೆಯ ಉಳಿತಾಯ ಖಾತೆ ಸಂಖ್ಯೆ 052110026480ಗೆ ಜಮೆ ಮಾಡಲು ಆದೇಶಿಸಿದೆ.

ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 02 ಟಿಎಫ್‌ಪಿ 2018, ದಿನಾಂಕ:03-04-2018ರಲ್ಲಿ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಅಧಿಕಾರದನ್ವಯ ಹಾಗೂ ಆರ್ಥಿಕ ಇಲಾಖೆಯ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: ಆಇ 05 ಬಿಪಿಇ 2018, ದಿನಾಂಕ:24-07-2018 ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 594 ವೆಚ್ಚ-6/2017, ದಿನಾಂಕ:25-07-2018ರ ಸಹಮತಿಯನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಎ. ವೆಂಕಟೇಶ್
(ಎ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

16.8.18

**ಗೆ,**

1. ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
5. ವಿಶೇಷಾಧಿಕಾರಿಗಳು, ಜಿಲ್ಲಾ ಪಂಚಾಯತಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ವ್ಯವಸ್ಥಾಪಕರು, ದೇನಾ ಬ್ಯಾಂಕ್, ಇಂದಿರಾನಗರ ಶಾಖೆ, ಬೆಂಗಳೂರು.
8. ಇಲಾಖಾ ವೆಬ್‌ಸೈಟ್ / ಕರ್ನಾಟಕ ವಿಕಾಸ ಮಾಸ ಪತ್ರಿಕೆ.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ :**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
4. ನಿರ್ದೇಶಕರು(ಪಂ.ರಾಜ್-2), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.